**ಅತೀ ಜರೂರು**

ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/181/ಸ್ವಾ.ವಿ.ಜ./2019-20

ದಿನಾಂಕ: 03.01.2020.

## ಸುತ್ತೋಲೆ

ವಿಷಯ: ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಕುರಿತು.

ಉಲ್ಲೇಖ: ದಿನಾಂಕ:30.12.2019 ರಂದು ನಡೆದ ಮಾನ್ಯ ಉಪ ಮುಖ್ಯಮಂತ್ರಿಗಳ ಸಭೆಯ ತೀರ್ಮಾನದಂತೆ.

* * * * * *

ಸ್ವಾಮಿ ವಿವೇಕಾನಂದ ಜನ್ಮದಿನೋತ್ಸವ ಆಚರಣೆ ಸಂಬಂಧ ದಿನಾಂಕ:12.01.2020 ರಂದು ಶ್ರೀ ಕಂಠೀರವ ಒಳಾಂಗಣ ಕ್ರೀಡಾಂಗಣ, ಬೆಂಗಳೂರು, ಇಲ್ಲಿ **"ರಾಷ್ಟ್ರೀಯ ಯುವ ದಿನಾಚರಣೆ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪ ಮುಖ್ಯಮಂತ್ರಿಗಳು, ಮಾನ್ಯ ಸಚಿವರುಗಳು ಪಾಲ್ಗೊಳ್ಳಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ 2018-19ನೇ ಶೈಕ್ಷಣಿಕ ಸಾಲಿನಲ್ಲಿ ಶೈಕ್ಷಣಿಕ ಹಾಗೂ ಪಠ್ಯೇತರ ಕ್ಷೇತ್ರದಲ್ಲಿ ವಿಶೇಷ ಸಾಧನೆಗೈದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನ್ಯ ಮುಖ್ಯಮಂತ್ರಿಗಳಿಂದ ಪುರಸ್ಕರಿಸಲು ತೀರ್ಮಾನಿಸಲಾಗಿದೆ.

ಈ ಸಂಬಂಧ ತಮ್ಮ ವ್ಯಾಪ್ತಿಯ ವಿಶ್ವವಿದ್ಯಾಲಯ ಮಟ್ಟದಲ್ಲಿ **ಪ್ರಥಮ ರ್‍ಯಾಂಕ್** ಪಡೆದ ವಿದ್ಯಾರ್ಥಿಗಳು ಹಾಗೂ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ (ರಾಷ್ಟ್ರೀಯ / ಅಂತರಾಷ್ಟ್ರೀಯ) ಮಟ್ಟದಲ್ಲಿ ವಿಶೇಷ ಸಾಧನೆ ಮಾಡಿದ ವಿದ್ಯಾರ್ಥಿಗಳ ವಿವರಗಳನ್ನು ಈ ಕೆಳಕಂಡ ನಮೂನೆಯಲ್ಲಿ ಭರ್ತಿ ಮಾಡಿ ದಿನಾಂಕ:04.01.2020 ಸಂಜೆ:5.00 ರೊಳಗೆ ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ರವರಿಗೆ ತುರ್ತಾಗಿ jdacademic2019@gmail.com ಈ-ಮೇಲ್ ವಿಳಾಸಕ್ಕೆ ಸಲ್ಲಿಸಲು ಸೂಚಿಸಲಾಗಿದೆ. ವಿಶ್ವವಿದ್ಯಾಲಯ ಪ್ರಕಟಿಸಿರುವ ರ್‍ಯಾಂಕ್ ಪ್ರತಿಯನ್ನು Scan ಮಾಡಿ ಕಳುಹಿಸುವುದು.

ನಮೂನೆ - 1

| ಕ್ರಸಂ. | ವಿದ್ಯಾರ್ಥಿಗಳ ಹೆಸರು | ಕಾಲೇಜಿನ ಹೆಸರು | ರ್‍ಯಾಂಕ್ ಪಡೆದ ವಿಶ್ವವಿದ್ಯಾಲಯದ ಹೆಸರು (ಪ್ರಮಾಣ ಪತ್ರ ಲಗತ್ತಿಸುವುದು) | ವಿದ್ಯಾರ್ಥಿಯ ದೂರವಾಣಿ ಸಂಖ್ಯೆ |
|---|---|---|---|---|
| | | | | |

ನಮೂನೆ - 2

| ಕ್ರಸಂ. | ವಿದ್ಯಾರ್ಥಿಗಳ ಹೆಸರು | ಕಾಲೇಜಿನ ಹೆಸರು | ಕ್ರೀಡೆ / ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಾಡಿದ ವಿಶೇಷ ಸಾದನೆ (ಪ್ರಮಾಣ ಪತ್ರ ಲಗತ್ತಿಸುವುದು) | ವಿದ್ಯಾರ್ಥಿಯ ದೂರವಾಣಿ ಸಂಖ್ಯೆ |
|---|---|---|---|---|
| | | | | |

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:

1. ಎಲ್ಲಾ ಜಿಲ್ಲಾ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ತುರ್ತು ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಕಛೇರಿ ಪ್ರತಿ.